ದಿನಾಂಕ 13-06-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ : ವಾದಿಯ ಪರ ಶ್ರೀ ಎ.ಸಿ.ಸಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿರುವ ಸಂಗತಿಗಳು ಸತ್ಯದಿಂದ ಕೂಡಿದ್ದು, ಪ್ರಮಾಣ ಪತ್ರದಲ್ಲಿರುವ ಸಹಿಗಳು ನನ್ನದೇ ಆಗಿರುತ್ತವೆ.

ಆಸ್ತಿ ಸಂಃ 59/2 ರ ಕರ ನಿರ್ಧರಣಾ ಪಟ್ಟಿಯ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ-1 ಎಂದು, ದಿ 02-01-1967 ರ ನೋಂದಾಯಿತ ಖರೀದಿ ಪತ್ರದ ದೃಢೀಕೃತ ನಕಲನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ-2 ಎಂದು, 3- ಛಾಯಾ ಚಿತ್ರಗಳು ಮತ್ತು ಅವುಗಳಿಗೆ ಸಂಬಂಧಿಸಿದೆ ಎಂದು ಹೇಳುವ ಒಂದು ಸಿ.ಡಿಯನ್ನು ಹಾಜರು ಮಾಡಿದ್ದು ಅವುಗಳನ್ನು ನಿ.ಪಿ-3 ರಿಂದ 6 ಎಂದು, ಸ್ವೀಕೃತಿಯನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ-7 ಎಂದು, ಠಾಣಾಧಿಕಾರಿ, ಆಡೂರ ಪೊಲೀಸ್ ಠಾಣೆಯವರು ನೀಡಿರುವ ಹಿಂಬರಹವನ್ನು ಹಾಜರು ಮಾಡಿದ್ದು ಅದನ್ನು ನಿ.ಪಿ-8 ಎಂದು ಗುರುತಿಸ ಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದು, ಮುಂದುವರೆದ ಮುಖ್ಯ ವಿಚಾರಣೆಗೆ ಮುಂದೂಡಲಾಯಿತು).

**(**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು**)**

ಓ. ಹೇ. ಕೆ ಸರಿ ಇದೆ ಎಂದು
ಒಪ್ಪಿರುತ್ತಾರೆ.
Sd/-

ದಿವಾಣಿ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ
ಹಾನಗಲ್

ಸಾಕ್ಷಿದಾರರ ಸಹಿ